ಮಾಧ್ಯಮ ಮಾಹಿತಿ:

ಮಾನ್ಯ ಮುಖ್ಯ ಆಯುಕ್ತರು ರವರಿಂದ ಶಿವಾನಂದ ವೃತ್ತ ಮೇಲುಸೇತುವೆ ಕಾಮಗಾರಿ ತಪಾಸಣೆ:

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯೋಜನಾ ವಿಭಾಗದ ಕೈಗೆತ್ತಿಕೊಂಡಿರುವ ಶಿವಾನಂದ ವೃತ್ತ ಮೇಲುಸೇತುವೆ ಕಾಮಗಾರಿಯನ್ನು ಇಂದು ಮಾನ್ಯ  ಮುಖ್ಯ ಆಯುಕ್ತರು ಶ್ರೀ ಗೌರವ್ ಗುಪ್ತಾ ರವರು ತಪಾಸಣೆ ನಡೆಸಿದರು. ಈ ವೇಳೆ ಜಂಟಿ ಆಯುಕ್ತರುಗಳಾದ ಶ್ರೀಮತಿ ಪಲ್ಲವಿ, ಶ್ರೀ ಸರ್ಫರಾಜ್ ಖಾನ್, ಪ್ರಧಾನ ಅಭಿಯಂತರರಾದ ಶ್ರೀ.ಪ್ರಭಾಕರ್, ಯೋಜನಾ ವಿಭಾಗದ ಮುಖ್ಯ ಅಭಿಯಂತರರು ಶ್ರೀ ಲೋಕೇಶ್ ಹಾಗೂ ಇನ್ನಿತರೆ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

ಶಿವಾನಂದ ವೃತ್ತದ ಬಳಿ ಕೈಗೆತ್ತಿಕೊಂಡಿರುವ ಮೇಲುಸೇತುವೆ ಕಾಮಗಾರಿಯ ಸ್ಥಳದಲ್ಲಿ ಇರುವ ಸಮಸ್ಯೆಗಳನ್ನು ಇತ್ಯರ್ಥಪಡಿಸಲಾಗಿದ್ದು, ಬಾಕಿಯಿರುವ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಮುಖ್ಯ ಆಯುಕ್ತರು ಗೌರವ್ ಗುಪ್ತ ರವರು ತಿಳಿಸಿದರು.

ಶಿವಾನಂದ ವೃತ್ತದ ಬಳಿ 493 ಮೀಟರ್ ಉದ್ದದ ಮೇಲುಸೇತುವೆಯನ್ನು ಕೈಗೆತ್ತಿಕೊಳ್ಳಲಾಗಿದೆ. ಈ ಮೇಲುಸೇತುವೆಗೆ 16 ಪಿಲ್ಲರ್ ಗಳು ಬರಲಿದ್ದು, ಅದರಲ್ಲಿ ಈಗಾಗಲೇ 15 ಪಿಲ್ಲರ್ ಗಳ ಕಾಮಗಾರಿ ಪೂರ್ಣಗೊಂಡಿದೆ. ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಮುಂಭಾಗ ಜಲಮಂಡಳಿಯಿಂದ 450 ಎಂ.ಎಂನ ನೀರಿನ ಪೈಪ್ ಲೈನ್ ಅನ್ನು ಈಗಾಗಲೇ ಬೇರೆಡೆ ಸ್ಥಳಾಂತರಿಸಿದ್ದು, ಅದರಡಿ 700 ಎಂ.ಎಂನ ನೀರಿನ ಪೈಪ್ ಲೈನ್ ಇದ್ದ ಪರಿಣಾಮ ಪಿಲ್ಲರ್ ಕಾಮಗಾರಿ ಮಾಡಲು ಸಾಧ್ಯವಾಗಿರಲಿಲ್ಲ. ಇದೀಗ ಪೈಪ್‌ಲೈನ್ ಬದಲಿಸಿದ್ದು, ಪಿಲ್ಲರ್ ಕಾಮಗಾರಿ ಪ್ರಗತಿಯಲ್ಲಿದೆ. ಬಾಕಿಯಿರುವ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

ಮೇಲುಸೇತುವೆಯ ಎರಡೂ ಕಡೆ ರಸ್ತೆ ದುರಸ್ತಿಪಡಿಸಬೇಕಿದೆ. ರಸ್ತೆ ದುರಸ್ತಿ ಮಾಡಿದ ನಂತರ ಜನರಿಗೆ ಯಾವುದೇ ಸಮಸ್ಯೆ ಆಗದಂತೆ ಮುಚ್ಚಿರುವ ರಸ್ತೆಗಳನ್ನು ಹಂತ-ಹಂತವಾಗಿ ತೆರವು ಮಾಡಿ ವಾಹನ ಸಂಚಾರಕ್ಕೆ ಅನುವು ಮಾಡಿಕೊಡಲಾಗುವುದು. ಈ ಭಾಗದಲ್ಲಿ ಸಂಚಾರ ದಟ್ಟಣೆಯಾಗದಂತೆ ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸುವಂತೆ, ಅಲ್ಲದೇ ಮೇಲು ಸೇತುವೆ ಅಡಿಯಲ್ಲಿ ಕಾಮಗಾರಿ ಮುಗಿದಿರುವ ಸ್ಥಳದಲ್ಲಿ ಸರ್ವಿಸ್ ರಸ್ತೆ ಯನ್ನು ಸಾರ್ವಜನಿಕರ ಸಂಪರ್ಕ ಕ್ಕೆ ಅನುವು ಮಾಡಿಕೊಡಲು ಸೂಚಿಸಿದರು.

ಈ ಸಂಬಂದ ದಿನ ನಿತ್ಯದಲ್ಲಿ ಕಾಮಗಾರಿಯ ಮೇಲುಸ್ತುವಾರಿ ವಹಿಸಿ, ಆ ಒಂದೆರಡು ದಿನದಲ್ಲಿ ನಿರ್ದಿಷ್ಟ ಗುರಿಯನ್ನು ನಿಗದಿಪಡಿಸಿಕೊಂಡು, ತ್ವರಿತವಾಗಿ ಯಾವ ಕೆಲಸ ಆಗಬೇಕು ಅದನ್ನು  ಮಾಡಿ ಮುಗಿಸಲು ಸೂಚಿಸಿ, ನಿರ್ದಿಷ್ಟ ಹಾಗೂ ತ್ವರಿತ ಅವಧಿಯೊಳಗೆ ಸದರಿ ಯೋಜನೆ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು.